# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ. 174-ಹೆಚ್.ಎಸ್.ಆರ್ ಬಡಾವಣೆ,

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/2020-21 ದಿನಾಂಕ: 22/09/2021 ಹಾಗೂ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರು ದಿನಾಂಕ: 08.02.2022 ರಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.174 ಹೆಚ್.ಎಸ್.ಆರ್ ಕಛೇರಿಯಲ್ಲಿ ವಾರ್ಡ್ ಸಮಿತಿ ಸದಸ್ಯರೊಂದಿಗೆ ಮಾತ್ರ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು/ನೋಡಲ್ ಅಧಿಕಾರಿ, ಕಾರ್ಯದರ್ಶಿ/ಸಹಾಯಕ ಅಭಿಯಂತರರು, ಸದ್ಯಸರುಗಳು ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು.**

| ಕ್ರ.ಸಂ | ಹೆಸರು | ಹುದ್ದೆ | ಮೋಬೈಲ್ ಸಂಖ್ಯೆ |
|---|---|---|---|
| 1 | ಶ್ರೀ ಆರ್. ವೆಂಕಟಚಲಪತಿ ಕ.ಆ.ಸೇ, | ನೋಡಲ್ ಅಧಿಕಾರಿ ವಾ.ನಂ.174 ಹಾಗೂ ಜಂಟಿ ಆಯುಕ್ತರು (ಮಹದೇವಪುರ) ವಲಯ | 9513322144 |
| 2 | ಶ್ರೀ ರಾಮೇಗೌಡ.ಕೆ.ಎಸ್ | ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂ.174 | 9480688174 |
| 3 | ಶ್ರೀ ಬಿ.ಎನ್.ಆರ್ ರೆಡ್ಡಿ | ಸದಸ್ಯರು | 9989000017 |
| 4 | ಶ್ರೀ ಹೆಚ್.ಇ. ಚಂದ್ರಶೇಖರ | ಸದಸ್ಯರು | 9880987339 |
| 5 | ಶ್ರೀ ರಾಮಚಂದ್ರ | ಸದಸ್ಯರು | 9845056649 |
| 6 | ಶ್ರೀ ಹನುಮಂತರಾಯ.ಟಿ | ಸ.ಕಾ.ಅ. (ಹೆಚ್.ಎಸ್.ಆರ್ ಉಪವಿಭಾಗ) | 9480688256 |
| 7 | ಶ್ರೀ ಸಾಯಿಬಣ್ಣ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | 9845444039 |
| 8 | ಎಸ್ ಸುಧೀರ್ | ಪಶುಸಂಗೋಪಾನೆ ಇಲಾಖೆ | 9845226800 |
| 9 | ಶ್ರೀ ಯತೀಶ್, | ಸಹಾಯಕ ಅಭಿಯಂತರರು, ಬೆಸ್ಕಾಂ | 9449840476 |
| 10 | ಶ್ರೀ ವಿಕಾಸ ಡಿ.ಎಸ್. | ಕಿರಿಯ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ | 9110823989 |
| 11 | ಶ್ರೀ ಹೆಚ್.ಆರ್ ಹರೀಶ್ | ಅರಣ್ಯ ವಲಯ ಅಧಿಕಾರಿಗ | 9742612471 |

ವಾರ್ಡ್ ಅಧ್ಯಕ್ಷರು/ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರನ್ನು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸುತ್ತಾ, ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಇಂದಿನ ಸಭೆಯಲ್ಲಿ ಚರ್ಚಿಸಲಾಗಿದ್ದು. ಹಾಗೂ ವಿವಿಧ ಇಲಾಖೆಯ ಅಧಿಕಾರಿ/ಸಿಬ್ಬಂದಿ ವರ್ಗದವರು ಸಭೆಗೆ ಗೈರು ಹಾಜರಾಗಿರುವ ಬಗ್ಗೆ ಸದಸ್ಯರು ಆಕ್ಷೇಪಿಸುತ್ತಾ, ನೋಡಲ್ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸಿದರು.

- **ಸಂಚಾರಿ ವಿಭಾಗ**

1. ವಾರ್ಡ್ ವ್ಯಾಪ್ತಿಯ 1ನೇ ಸೆಕ್ಟರ್‌ನಲ್ಲಿರುವ ಆರ್.ಟಿ.ಓ ಕಛೇರಿಯ ಮುಂಭಾಗ ವಾಹನಗಳನ್ನು ಪಾರ್ಕಿಂಗ್ ಮಾಡಲಾಗುತ್ತಿದ್ದು, ಇದರಿಂದ ವಾಹನಗಳ ಸುಗಮ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ಬಗ್ಗೆ ಶ್ರೀ ಬಿ.ಎನ್.ಆರ್ ರೆಡ್ಡಿ ಮತ್ತು ಇತರೆ ಸದಸ್ಯರು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಈ ಬಗ್ಗೆ ಅಧ್ಯಕ್ಷರು/ನೋಡಲ್ ಅಧಿಕಾರಿ ರವರು ಮುಂದಿನ ಸಭೆಗೆ ಆರ್.ಟಿ.ಓ ಕಛೇರಿಯ ಸಂಬಂಧಪಟ್ಟ ಅಧಿಕಾರಿಗಳಿಗೆ ಮುಂದಿನ ಸಭೆಗೆ ಹಾಜರಾಗುವಂತೆ ಸೂಚಿಸಿರುತ್ತಾರೆ.

(2...)

Scanned with

2. ಹಿಂದಿನ ಸಭೆಯ ದಿನಾಂಕ: 02.02.2022 ರಂದು ವಾರ್ಡ್ ವ್ಯಾಪ್ತಿಯಲ್ಲಿ ಹಲವು ರಸ್ತೆಗಳಲ್ಲಿ ಹಳೆಯ ವಾಹನಗಳನ್ನು ರಸ್ತೆ ಬದಿಯಲ್ಲಿ ತುಂಬ ವರ್ಷಗಳಿಂದ ನಿಲ್ಲಿಸಿರುವುದರಿಂದ ವಾಹನಗಳ ಸುಗಮ ಸಂಚಾರಕ್ಕೆ ಮತ್ತು ಬಿಬಿಎಂಪಿ ಪೌರಕಾರ್ಮಿಕರಿಂದ ಕಸ ಗುಡಿಸುವಿಕೆಗೂ ಅಡ್ಡಿಯಾಗುತ್ತಿದ್ದು, ಹಾಗೂ ಇದರಿಂದ ಇತರೆ ಚಟುವಟಿಕೆಗಳಿಗೆ ದುರಪಯೋಗ ಪಡಿಸಿಕೊಳ್ಳುವ ಸಾಧ್ಯತೆ ಇರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಈ ಬಗ್ಗೆ ಅಧ್ಯಕ್ಷರ/ನೋಡಲ್ ಅಧಿಕಾರಿಗಳು ರವರು ಪ್ರತ್ಯೇಕವಾಗಿ ತಂಡ ರಚಿಸಲಾಗಿದ್ದು, ತಂಡದಲ್ಲಿ ಕಂದಾಯ ಇಲಾಖೆ, ಸಂಚಾರಿ ವಿಭಾಗ ಮತ್ತು ಕಾಮಗಾರಿ ಇಲಾಖೆಯಿಂದ Unclaimed ವಾಹನಗಳು ತೆರವುಗೊಳಿಸಲು ಸೂಚಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

- **ಬೆಸ್ಕಾಂ**

1. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯಿಂದ ಕೆಲವು ಪ್ರದೇಶಗಳಲ್ಲಿ ರಸ್ತೆ ಪಾದಚಾರಿ ಮಾರ್ಗಗಳಲ್ಲಿ ಸುಮಾರು ದಿನಗಳ ಹಿಂದೆ ಅಗೆದಿದ್ದು, ಇದುವರೆಗೂ ಗುಂಡಿಗಳನ್ನು ಮುಚ್ಚಲು ಕ್ರಮವಹಿಸಿರುವುದಿಲ್ಲ ಎಂದು ಶ್ರೀ ಬಿ.ಎನ್.ಆರ್ ರೆಡ್ಡಿ ರವರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ ಯತೀಶ್ ಸಹಾಯಕ ಅಭಿಯಂತರರು, ಬೆಸ್ಕಾಂ ರವರು ಕೂಡಲೇ ವೆಟ್‌ಮಿಕ್ಸ್ ತುಂಬಿಸಿ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಶ್ರೀ ಬಿ.ಎನ್.ಆರ್ ರೆಡ್ಡಿ ರವರು ಎಷ್ಟು ಕಿ.ಮೀ ರಸ್ತೆಯನ್ನು ಬೆಸ್ಕಾಂ ಇಲಾಖೆಯಿಂದ ಅಗೆದಿರುವ ಮಾಹಿತಿ ಬಗ್ಗೆ ಪ್ರಸ್ತಾಪಿಸಿದರು. ಅದಕ್ಕೆ ಶ್ರೀ ಯತೀಶ್ ಸಹಾಯಕ ಅಭಿಯಂತರರು, ರವರು ಸುಮಾರು 90.00 ಕಿ.ಮೀ ವರೆವಿಗೂ ಕೇಬಲ್ ಅಳವಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಶ್ರೀಘ್ರದಲ್ಲಿ ವೆಟ್‌ಮಿಕ್ಸ್ ತುಂಬಿಸಿ ರಸ್ತೆಯನ್ನು ಯಥಾಸ್ಥಿತಿಗೆ ತರಲಾಗುವುದೆಂದು ಸಭೆಗೆ ತಿಳಿಸಿದರು.
2. ಹಿಂದಿನ ಹಲವು ಸಭೆಗಳಲ್ಲಿ ಪ್ರಸ್ತಾಪಿಸಿರುವಂತೆ ಅನಧಿಕೃತವಾಗಿ ಟವರ್‌ಗಳನ್ನು ಅಳವಡಿಸಿದ್ದು, ಬಿಬಿಎಂಪಿ ಇಲಾಖೆಯಿಂದ ಸಂಪರ್ಕವನ್ನು ಕಡಿತಗೊಳಿಸಲು ಪತ್ರ ಬರೆಯಲಾಗಿದ್ದು, ಇಲ್ಲಿಯವರೆವಿಗೂ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲವೆಂದು ಶ್ರೀ ಚಂದ್ರಶೇಖರ ಮತ್ತು ಇತರೆ ಸದಸ್ಯರು ಸಭೆಯಲ್ಲಿ ಆಕ್ಷೇಪಿಸಿರುತ್ತಾರೆ. ಈ ಬಗ್ಗೆ ಶ್ರೀ ಯತೀಶ್ ಸಹಾಯಕ ಅಭಿಯಂತರರು, ರವರು ಈಗಾಗಲೇ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗಿದ್ದು, ಸದರಿ ಮಾಲೀಕರು ಅನಧಿಕೃತವಾಗಿ ಪುನಃ ಸಂಪರ್ಕವನ್ನು ಪಡೆದುಕೊಂಡಿರುವ ಬಗ್ಗೆ ನಮ್ಮ ಗಮನಕ್ಕೆ ಬಂದಿರುವುದಿಲ್ಲ ಟವರ್ ತೆರವುಗೊಳಿಸುವ ಕಾರ್ಯಚರಣೆಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.
3. ಬೆಸ್ಕಾಂ ಕಂಬದ ಮೇಲೆ ಮರದ ರೆಂಬೆ ಕೊಂಬೆಗಳನ್ನು ಹಾದುಹೋಗಿದ್ದು, ಬೆಸ್ಕಾಂ ಇಲಾಖೆಯಿಂದ ನಿರ್ದಿಷ್ಟ ಮಾರ್ಗಸೂಚಿಗಳನ್ನು ಇದ್ದರೂ ರೆಂಬೆ ಕೊಂಬೆಗಳನ್ನು ತೆಗೆಯಲು ಯಾವುದೇ ಕೈಗೊಂಡಿರುವುದಿಲ್ಲವೆಂದು ಶ್ರೀ ಬಿ.ಎನ್.ಆರ್ ರೆಡ್ಡಿ ಮತ್ತು ಇತರೆ ಸದಸ್ಯರು ಸಭೆಯಲ್ಲಿ ಆಕ್ಷೇಪಿಸಿದರು. ಈ ಬಗ್ಗೆ ಶ್ರೀ ಯತೀಶ್ ಸಹಾಯಕ ಅಭಿಯಂತರರು, ರವರು ಕೆ.ಪಿ.ಟಿ.ಸಿ.ಎಲ್ ರವರೊಂದಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

- **ಕಾಮಗಾರಿ**

1. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯ ಪರಂಗಿಪಾಳ್ಯ ಗ್ರಾಮದಲ್ಲಿ ಇತ್ತೀಚೆಗೆ ರಸ್ತೆ ಡಾಂಬರೀಕರಣ ಕಾಮಗಾರಿ ಪೂರ್ಣಗೊಂಡಿದ್ದು, ಆದರೆ ರಸ್ತೆ ಬದಿಯಲ್ಲಿ ಡೆಬ್ರಿಸ್ ಅದೇ ಸ್ಥಳದಲ್ಲಿ ಬಿಟ್ಟಿದ್ದು, ಇದನ್ನು ಕೂಡಲೇ ತೆರವುಗೊಳಿಸುವಂತೆ ಶ್ರೀ ರಾಮಚಂದ್ರ ಮತ್ತು ಇತರೆ ಸದಸ್ಯರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ಶ್ರೀ ರಾಮೇಗೌಡ ಕಾರ್ಯದರ್ಶಿ/ಸಹಾಯಕ ಅಭಿಯಂತರರು ರವರು ತೆರವುಗೊಳಿಸಲು ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.
2. ಹಿಂದಿನ ಸಭೆಯ ದಿನಾಂಕ: 02.02.2022 ರಂದು 2021-22ನೇ ಸಾಲಿನ ಒಂಟಿ ಮನೆ ಯೋಜನೆ ಅಡಿಯಲ್ಲಿ ಆಯ್ಕೆಯಾಗಿರುವ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗದ ಫಲಾನುಭವಿಗಳ ನಿವೇಶನವನ್ನು ವಾರ್ಡ್ ಸಮಿತಿ ಸದಸ್ಯರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ಅಭಿಯಂತರವರೊಂದಿಗೆ ಸ್ಥಳ ಪರಿಶೀಲನೆ ಮಾಡಿ ಮುಂದಿನ ಕ್ರಮ ವಹಿಸುವಂತೆ ಸಭೆಯಲ್ಲಿ ಚರ್ಚಿಸಲಾಗಿದೆ.

Scanned with

ಅಂತಿಮವಾಗಿ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ರವರು, ವಾರ್ಡ್ ನಂ. 174 ಹಾಗೂ ಜಂಟಿ ಆಯುಕ್ತರು, (ಮಹಾದೇವಪುರ ವಲಯ) ರವರು ಸಭೆಯಲ್ಲಿ ಚರ್ಚಿಸಲಾದ ಎಲ್ಲಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿ ರವರು ತುರ್ತು ಕ್ರಮವಹಿಸಲು ಸೂಚಿಸಿದರು ಹಾಗೂ ಸಾರ್ವಜನಿಕರು ನೀಡಿರುವ ದೂರಿನ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸುತ್ತಾ ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ವಾರ್ಡ್ ನಂ.174ರ
ಸಹಾಯಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು/ನೋಡಲ್ ಅಧಿಕಾರಿ
ಜಂಟಿ ಆಯುಕ್ತರು, ಮಹಾದೇವಪುರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2) ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ.ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮಾನ್ಯ ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4) ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5) ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
6) ವಾರ್ಡ್ ಸಮಿತಿಯ ಸದಸ್ಯರ/ಸ್ವಯಂ ಸೇವಕರ ಮಾಹಿತಿಗಾಗಿ ಸಲ್ಲಿಸಿದೆ.
7) ಕಛೇರಿ ಪ್ರತಿ.

Scanned with